# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| | | |
|---|---|---|
| ಭಾಗ – ೩<br>**Part – III** | ಬೆಂಗಳೂರು, ಸೋಮವಾರ, ೦೩, ಆಗಸ್ಟ್, ೨೦೨೬ (ಶ್ರಾವಣ, ೧೨, ಶಕವರ್ಷ, ೧೯೪೮)<br>**BENGALURU, MONDAY, 03, AUGUST, 2026 (SHRAVANA ,12,ShakaVarsha,1948)** | ನಂ. ೫೮೯<br>**No.589** |

## <u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ:** ದಾವಣಗೆರೆ-ಹರಿಹರ ಸ್ಥಳೀಯ ಯೋಜನಾ ಪ್ರದೇಶಕ್ಕೆ ಅಮೃತ್ ಯೋಜನೆಯಡಿಯಲ್ಲಿ ತಯಾರಿಸಲಾಗಿರುವ GIS ಆಧಾರಿತ ಮಹಾಯೋಜನೆ (ಪ-III) 2041ಕ್ಕೆ ಅಂತಿಮ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ನಅಇ 157 ಬೆಂರೂಪ್ರಾ 2025, ದಿನಾಂಕ:12.06.2025.
2. ಆಯುಕ್ತರು, ದಾವಣಗೆರೆ-ಹರಿಹರ ನಗರಾಭಿವೃದ್ಧಿ ಪ್ರಾಧಿಕಾರವರ ಪತ್ರ ಸಂಖ್ಯೆ: ದಾಹನಪ್ರಾ/ ಯೋವಿ/ ಮಯೋ/(ಪ-III)2041 (ಅಂತಿಮ)/ಸಿಆರ್/2025-26/15, ದಿನಾಂಕ:10.04.2026.
3. ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಏಕ ಕಡತ ಸಂಖ್ಯೆ: DTCP-15-MPP-2017-18, ದಿನಾಂಕ: 18.05.2026.

*******

**<u>ಪ್ರಸ್ತಾವನೆ:</u>**

ಮೇಲೆ ಓದಲಾದ ಕ್ರಮಾಂಕ (1) ರ ಸರ್ಕಾರದ ಆದೇಶದಲ್ಲಿ ದಾವಣಗೆರೆ-ಹರಿಹರ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ1961ರ ಕಲಂ 13(1) ರನ್ವಯ ತಾತ್ಕಾಲಿಕ ಅನುಮೋದನೆಯನ್ನು ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (2) ರ ಪತ್ರದಲ್ಲಿ ದಾವಣಗೆರೆ-ಹರಿಹರ ಸ್ಥಳೀಯ ಯೋಜನಾ ಪ್ರದೇಶಕ್ಕೆ ಸಿದ್ಧಪಡಿಸಿರುವ ಮಹಾಯೋಜನೆ (ಪ-III) ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 13(1) ಮತ್ತು (2) ರನ್ವಯ ಕ್ರಮ ಜರುಗಿಸಿ ಮಹಾಯೋಜನೆ (ಪ-III) ನಕ್ಷೆಗಳನ್ನು ಹಾಗೂ ವರದಿಗಳನ್ನು ಸಿದ್ಧಪಡಿಸಿ ಸರ್ಕಾರದ ಅಂತಿಮ ಅನುಮೋದನೆ ಕೋರಿ ಆಯುಕ್ತರು, ದಾವಣಗೆರೆ-ಹರಿಹರ ನಗರಾಭಿವೃದ್ಧಿ ಪ್ರಾಧಿಕಾರ ರವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (3) ರ ಏಕ ಕಡತದಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕ ರವರು ದಾವಣಗೆರೆ-ಹರಿಹರ ಸ್ಥಳೀಯ ಯೋಜನಾ ಪ್ರದೇಶದ ಜನಸಂಖ್ಯೆಯು 2011 ರಲ್ಲಿ 5,47,943 ಇದ್ದು,

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**



ಯೋಜನಾ ಅವಧಿಗೆ ಅಂದರೆ 2041ನೇ ಇಸವಿಗೆ ಜನಸಂಖ್ಯೆಯು ಸುಮಾರು 14,00,000 ಆಗಬಹುದೆಂದು ಅಂದಾಜಿಸಿ ಮಹಾಯೋಜನೆಯನ್ನು ಸಿದ್ಧಪಡಿಸಲಾಗಿದೆ. ಸ್ಥಳೀಯ ಯೋಜನಾ ಪ್ರದೇಶದ ಒಟ್ಟು 27,212.23 ಹೆಕ್ಟೇರ್ ವಿಸ್ತೀರ್ಣದಲ್ಲಿ 15866.13 ಹೆಕ್ಟೇರ್ ಪ್ರದೇಶವನ್ನು ನಗರೀಕರಣ ಎಲ್ಲೆಯೆಂದು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಲಾಗಿದೆ. ಪಟ್ಟಣದ ಯೋಜಿತ ಬೆಳವಣಿಗೆಗಾಗಿ ಪ್ರಸ್ತಾಪಿಸಿರುವ 15866.13 ಹೆಕ್ಟೇರ್ ನಗರೀಕರಣ ಪ್ರದೇಶದಲ್ಲಿ ವಸತಿಗಾಗಿ 8901.73 ಹೆಕ್ಟೇರ್ (ಶೇ.56.11), ವಾಣಿಜ್ಯಕ್ಕಾಗಿ 729.60 ಹೆಕ್ಟೇರ್ (ಶೇ.4.6) ಕೈಗಾರಿಕೆಗಾಗಿ 770.61

ಹೆಕ್ಟೇರ್ (ಶೇ.4.86), ಸಾರ್ವಜನಿಕ/ಅರೆ ಸಾರ್ವಜನಿಕ ಉಪಯೋಗಕ್ಕೆ / ASI Monument 970.88 ಹೆಕ್ಟೇರ್ (ಶೇ.6.12), ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 1791.93 ಹೆಕ್ಟೇರ್ (ಶೇ.11.29), ಸಾರ್ವಜನಿಕ ಉಪಯುಕ್ತತೆಗಾಗಿ 119.40 ಹೆಕ್ಟೇರ್ (ಶೇ.0.75) ಹಾಗೂ ಸಾರಿಗೆ ಮತ್ತು ಸಂಪರ್ಕ ವಲಯಕ್ಕೆ 2581.98 ಹೆಕ್ಟೇರ್ (ಶೇ.16.27) ಪ್ರದೇಶವನ್ನು ಮೀಸಲಿಟ್ಟು ಭೂ ಉಪಯೋಗವನ್ನು ನಿಗಧಿಪಡಿಸಲಾಗಿದೆ. ಮಹಾಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3) ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ನಿಯಮಾನುಸಾರ ಸರ್ಕಾರದಲ್ಲಿ ಪರಿಶೀಲಿಸಲಾಗಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ನಅಇ 179 ಬೆಂರೂಪ್ರಾ 2026,**
**ಬೆಂಗಳೂರು, ದಿನಾಂಕ:03.08.2026.**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ, ದಾವಣಗೆರೆ-ಹರಿಹರ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ (ಜಿ.ಐ.ಎಸ್ ಆಧಾರಿತ) ಮಹಾಯೋಜನೆ (ಪ-III) 2041 ಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಪ್ರಕರಣ 13(3) ರನ್ವಯ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅಂತಿಮ ಅನುಮೋದನೆಯನ್ನು ನೀಡಲಾಗಿದೆ.

ಮಹಾಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

**ಷರತ್ತು:**
ಈ ಆದೇಶದ ದಿನಾಂಕದಿಂದ ಒಂದು ವರ್ಷದವರೆಗೆ ಪ್ರಾಧಿಕಾರವು ಯಾವುದೇ ಭೂ ಉಪಯೋಗ ಬದಲಾವಣೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಕೂಡದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಲತಾ.ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ,
(ಅಭಿವೃದ್ಧಿ ಪ್ರಾಧಿಕಾರ ಮತ್ತು ನಯೋಸೇ)
ನಗರಾಭಿವೃದ್ಧಿ ಇಲಾಖೆ.

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

P S BASAVARAJU